# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** ರಾಜ್ಯದ 04 ಜಿಲ್ಲೆಗಳ 08 ವಕ್ಫ್ ಸಂಸ್ಥೆಗಳ ದುರಸ್ಥಿ ಮತ್ತು ಜೀರ್ಣೋದ್ಧಾರಕ್ಕಾಗಿ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ :** 1) ಸರ್ಕಾರಿ ಆದೇಶ ಸಂಖ್ಯೆ: **RD 139 CWP 1977** ದಿನಾಂಕ: 23-08-1979 & **MWD 147 WES 2019**, ದಿನಾಂಕ: 05-02-2020.

2) ಸರ್ಕಾರಿ ಆದೇಶ ಸಂಖ್ಯೆ: **MWD 33 WES 2022**, ದಿನಾಂಕ: 11.04.2022 & 28.06.2022.

3) ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಇವರ ಪತ್ರ ಸಂಖ್ಯೆ: KBW/A6-2/GTS/RECOMM/02/2022-23, ದಿ: 23-09-2022.

**ಪ್ರಸ್ತಾವನೆ:**

ಮೇಲೆ (1)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ರಾಜ್ಯದಲ್ಲಿನ ವಕ್ಫ್ ಸಂಸ್ಥೆಗಳಿಗೆ Grant-in Aid Code ಅನ್ನು ಆಗಸ್ಟ್ 1979 ಹಾಗೂ ಫೆಬ್ರವರಿ 2020 ರಲ್ಲಿ ಜಾರಿಗೊಳಿಸಲಾಗಿದೆ.

ಮೇಲೆ (2)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ವಕ್ಫ್ ಸಂಸ್ಥೆಗಳ ಜೀರ್ಣೋದ್ಧಾರ ಹಾಗೂ ದುರಸ್ಥಿಗಾಗಿ 2022-23ನೇ ಸಾಲಿನ ಲೆಕ್ಕಶೀರ್ಷಿಕೆ: 2225-04-800-0-04(015) ರಡಿಯಲ್ಲಿ ರೂ.1000.00ಲಕ್ಷಗಳ ಅನುದಾನವನ್ನು ವಕ್ಫ್ ಸಂಸ್ಥೆಗಳ ದುರಸ್ಥಿ ಮತ್ತು ಜೀರ್ಣೋದ್ಧಾರಕ್ಕಾಗಿ ಹಂಚಿಕೆ ಮಾಡಲಾಗಿರುತ್ತದೆ. ಇದರಲ್ಲಿ ಮೊದಲನೇ ಹಾಗೂ ಎರಡನೇ ತ್ರೈಮಾಸಿಕ ಕಂತಾಗಿ ರೂ.500.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿರುತ್ತದೆ.

ಮೇಲೆ (3)ರಲ್ಲಿ ಓದಲಾದ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಇವರು ರಾಜ್ಯದ 04 ಜಿಲ್ಲೆಗಳ 08 ವಕ್ಫ್ ಸಂಸ್ಥೆಗಳ ದುರಸ್ಥಿ ಹಾಗೂ ಜೀರ್ಣೋದ್ಧಾರಕ್ಕಾಗಿ ಅನುದಾನವನ್ನು ಬಿಡುಗಡೆ ಮಾಡುವ ಕುರಿತು ಪ್ರಸ್ತಾವನೆಗಳು ಸ್ವೀಕೃತವಾಗಿದ್ದು, ಅನುದಾನ ಬಿಡುಗಡೆಗೊಳಿಸಬಹುದೆಂದು ತಿಳಿಸಿರುತ್ತಾರೆ. ಅದರಂತೆ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: MWD 12 WGA 2022 ,**
**ಬೆಂಗಳೂರು, ದಿನಾಂಕ: 28.09.2022**

ಮೇಲೆ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ 2022-23 ನೇ ಸಾಲಿನ ಲೆಕ್ಕಶೀರ್ಷಿಕೆ: 2225-04-800-0-04(015) ರಡಿಯಲ್ಲಿ ರೂ.1000.00 ಲಕ್ಷಗಳ ಅನುದಾನವನ್ನು ಮರು ಹಂಚಿಕೆ ಮಾಡಿರುವ ಅನುದಾನದಲ್ಲಿ ರೂ.84.00 ಲಕ್ಷಗಳ ಅನುದಾನವನ್ನು ರಾಜ್ಯದ 04 ಜಿಲ್ಲೆಗಳ 08 ವಕ್ಫ್ ಸಂಸ್ಥೆಗಳ ದುರಸ್ಥಿ ಮತ್ತು ಜೀರ್ಣೋದ್ಧಾರಕ್ಕಾಗಿ ಮಂಜೂರು ಮಾಡಿ ಅನುಬಂಧದಲ್ಲಿನ ಸಂಸ್ಥೆಗಳ ಎದುರಿಗೆ ಸೂಚಿಸಲಾಗಿರುವ ಪ್ರತ್ಯೇಕ ಮೊತ್ತವನ್ನು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಮಂಜೂರು ಮಾಡಿ ಆದೇಶಿಸಿದೆ.

ಕರ್ನಾಟಕ ರಾಜ್ಯ ವಕ್ಫ್ ಮಂಡಳಿ I.No. 520 28 SEP 2022

........2

**ಷರತ್ತುಗಳು:**

1. ಈ ವೆಚ್ಚವನ್ನು 2022-23ನೇ ಸಾಲಿನ ಲೆಕ್ಕ ಶೀರ್ಷಿಕೆ 2225-04-800-0-04(015) ರಡಿಯಲ್ಲಿ ವಕ್ಫ್ ಸಂಸ್ಥೆಗಳ ದುರಸ್ಥಿ ಮತ್ತು ಜೀರ್ಣೋದ್ಧಾರಕ್ಕಾಗಿ ಮರುಹಂಚಿಕೆ ಮಾಡಲಾದ ಅನುದಾನದ ಅಡಿಯಲ್ಲಿ ಭರಿಸತಕ್ಕದ್ದು.

2. ಮೇಲೆ ಓದಲಾದ (1)ರ ಆದೇಶದಂತೆ ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯು Grant-in-Aid ನಲ್ಲಿರುವ ಸೂಚನೆಗಳನ್ನು ವಕ್ಫ್ ಸಂಸ್ಥೆಗಳಿಗೆ ಹಣ ಬಿಡುಗಡೆಗೊಳಿಸುವ ಮುನ್ನ ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

3. ರೂ.5.00 ಲಕ್ಷಕ್ಕಿಂತ ಹೆಚ್ಚು ಅನುದಾನ ಮಂಜೂರು ಮಾಡಲಾಗಿರುವ ವಕ್ಫ್ ಸಂಸ್ಥೆಗಳಿಗೆ ಮೊದಲನೇ ಕಂತಿನ ರೂ.5.00 ಲಕ್ಷಗಳನ್ನು ಪ್ರಥಮ ಕಂತಿನಲ್ಲಿ ಬಿಡುಗಡೆ ಮಾಡಿ ಇನ್ನುಳಿದ ಮೊತ್ತವನ್ನು ಎರಡನೇ ಕಂತಿನಲ್ಲಿ ಬಿಡುಗಡೆ ಮಾಡತಕ್ಕದ್ದು. 2ನೇ ಕಂತಿನ ಅನುದಾನ ಬಿಡುಗಡೆ ಮಾಡುವ ಮೊದಲು ಕಾಮಗಾರಿಯ ಪ್ರಗತಿಯನ್ನು ಕಡ್ಡಾಯವಾಗಿ ಪರಿಶೀಲಿಸಿ ಪ್ರಗತಿಯಾದಲ್ಲಿ ಹಣ ಬಳಕೆ ಪ್ರಮಾಣ ಪತ್ರ ಪಡೆದ ನಂತರ ಮಾತ್ರ ಅನುದಾನ ಬಿಡುಗಡೆ ಮಾಡತಕ್ಕದ್ದು.
4. ರೂ.5.00ಲಕ್ಷಕ್ಕಿಂತ ಕಡಿಮೆ ಅನುದಾನ ಮಂಜೂರಾಗಿರುವ ವಕ್ಫ್ ಸಂಸ್ಥೆಗಳಿಗೆ ಅನುದಾನವನ್ನು ಒಂದೇ ಕಂತಿನಲ್ಲಿ ಬಿಡುಗಡೆ ಮಾಡತಕ್ಕದ್ದು.
5. ಸದರಿ ಅನುದಾನವನ್ನು ಯಾವ ಉದ್ದೇಶಕ್ಕಾಗಿ ಹಣ ಬಿಡುಗಡೆಗೊಳಿಸಲಾಗಿದೆಯೋ ಆ ಉದ್ದೇಶಕ್ಕಾಗಿ ಬಳಕೆಯಾಗಿರುವ ಬಗ್ಗೆ ಹಣ ಬಳಕೆ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಸಂಸ್ಥೆಗಳು ಕಡ್ಡಾಯವಾಗಿ ಕಳುಹಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 01 ಟಿಎಫ್‌ಪಿ 2022, ದಿನಾಂಕ:04.04.2022 ರಲ್ಲಿ ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ**
**ಮತ್ತು ಅವರ ಹೆಸರಿನಲ್ಲಿ,**

28/9/2022

(ಮುಕ್ತಾರ್ ಪಾಷ ಹೆಚ್.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು
ವಕ್ಫ್ ಇಲಾಖೆ.

ಗೆ:

1) ಮಹಾಲೇಖಪಾಲರು (ಅ ಮತ್ತು ಇ), ಕರ್ನಾಟಕ, ಬೆಂಗಳೂರು
2) ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ವೆಚ್ಚ) ವಿಧಾನ ಸೌಧ, ಬೆಂಗಳೂರು.
3) ಮುಖ್ಯಕಾರ್ಯನಿರ್ವಾಹಣಾಧಿಕಾರಿಗಳು, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ, ಕನ್ನಿಂಗ್ ಹ್ಯಾಂ ರಸ್ತೆ, ಬೆಂಗಳೂರು.
4) ಮಾನ್ಯ ಮುಜರಾಯಿ, ಹಜ್ ಮತ್ತು ವಕ್ಫ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು.
5) ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆ, ವಿಕಾಸ ಸೌಧ, ಬೆಂಗಳೂರು.
6) ಅಧ್ಯಕ್ಷರು/ವಕ್ಫ್ ಅಧಿಕಾರಿಗಳು, ಜಿಲ್ಲಾ ವಕ್ಫ್ ಸಲಹಾ ಸಮಿತಿ, ಬೆಳಗಾವಿ, ಉಡುಪಿ, ಶಿವಮೊಗ್ಗ ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳು.
7) ಸಮನ್ವಯ ಅಧಿಕಾರಿ, ಅಲ್ಪಸಂಖ್ಯಾತರ ಸಹಾಯವಾಣಿ ಕೇಂದ್ರ,(24x7) ವಸಂತನಗರ ಬೆಂಗಳೂರು.
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಸರ್ಕಾರದ ಆದೇಶ ಸಂಖ್ಯೆ: MWD 12 WGA 2022,**
**ಬೆಂಗಳೂರು, ದಿನಾಂಕ: 28.09.2022 ಕ್ಕೆ ಅನುಬಂಧ**

| ಕ್ರ. ಸಂ. | ಸಂಸ್ಥೆಯ ಹೆಸರು | ಕಾಮಗಾರಿ | ಮಂಜೂರಾದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|
| | 1. ಬೆಳಗಾವಿ ಜಿಲ್ಲೆ | | |
| 1 | ಹಜರತ ಶಮನಾಪೀರ ದರ್ಗಾ, ಸದಲಗಾ, ಚಿಕ್ಕೋಡಿ ತಾ, ಬೆಳಗಾವಿ ಜಿಲ್ಲೆ | (ದುರಸ್ಥಿ ಮತ್ತು ಜೀರ್ಣೋದ್ಧಾರ) | 25.00 |
| 2 | ಮನ್ನೂರ ವಲಿಶಾ ದರ್ಗಾ, ಕಬ್ಬೂರ ಗ್ರಾಮ, ಚಿಕ್ಕೋಡಿ ತಾ, ಬೆಳಗಾವಿ ಜಿಲ್ಲೆ | (ದುರಸ್ಥಿ ಮತ್ತು ಜೀರ್ಣೋದ್ಧಾರ) | 10.00 |
| 3 | ಸುನ್ನತ್ ಮುಸ್ಲಿಂ ಜಮಾತ್, ಗಜಬರವಾಡಿ ಗ್ರಾಮ, ಕುನ್ನೂರ ಪೋಸ್ಟ್, ನಿಪ್ಪಾಣಿ ತಾ, ಬೆಳಗಾವಿ ಜಿಲ್ಲೆ | (ದುರಸ್ಥಿ ಮತ್ತು ಜೀರ್ಣೋದ್ಧಾರ) | 10.00 |
| 4 | ಜಮಾತುಲ್ ಮುಸ್ಲಿಂಮೀನ್ ದರ್ಗಾ ಮೊಹಲ್ಲಾ, ನಿಪ್ಪಾಣಿ, ತಾ : ನಿಪ್ಪಾಣಿ, ಬೆಳಗಾವಿ ಜಿಲ್ಲೆ | (ದುರಸ್ಥಿ ಮತ್ತು ಜೀರ್ಣೋದ್ಧಾರ) | 09.00 |
| 5 | ಖಾಜಾ ನಿಜಾಮುದ್ದೀನ್ ವಕ್ಫ್ ಕಮಿಟಿ ಮುಸ್ಲಿಂ ಜಮಾತ್, ಪರಮಾನಂದವಾಡಿ ಗ್ರಾಮ, ರಾಯಬಾಗ ತಾ, ಬೆಳಗಾವಿ ಜಿಲ್ಲೆ | (ದುರಸ್ಥಿ ಮತ್ತು ಜೀರ್ಣೋದ್ಧಾರ) | 10.00 |
| | 2.ಉಡುಪಿ ಜಿಲ್ಲೆ | | |
| 6 | ಸುನ್ನಿ ಜಾಮಿಯಾ ಮಸೀದಿ, ಶಿರ್ವ, ಕಾಪು ತಾಲೂಕು, ಉಡುಪಿ ಜಿಲ್ಲೆ. | (ದುರಸ್ಥಿ ಮತ್ತು ಜೀರ್ಣೋದ್ಧಾರ) | 10.00 |
| | 3. ಶಿವಮೊಗ್ಗ ಜಿಲ್ಲೆ | | |
| 7 | ಹಜರತ್ ಬಾಬಾ ಬುಡೇನ್ ದರ್ಗಾ, ಹೊಳೇಹೊನ್ನುರ, ಭದ್ರಾವತಿ ತಾಲೂಕು, ಶಿವಮೊಗ್ಗ ಜಿಲ್ಲೆ | (ದುರಸ್ಥಿ ಮತ್ತು ಜೀರ್ಣೋದ್ಧಾರ) | 05.00 |
| | 4. ದಕ್ಷಿಣ ಕನ್ನಡ ಜಿಲ್ಲೆ | | |
| 8 | ಹಿದಾಯತುಲ್ ಇಸ್ಲಾಂ ಜುಮ್ಮಾ ಮಸ್ಜಿದ್, ಅಲಕಮಜಲು ಕುಲ್ ಗ್ರಾಮ, ಬಂಟ್ವಾಳ ತಾಲೂಕು, ದ.ಕ. ಜಿಲ್ಲೆ. | (ದುರಸ್ಥಿ ಮತ್ತು ಜೀರ್ಣೋದ್ಧಾರ) | 05.00 |
| | | ಒಟ್ಟು | 84.00 |

(ಎಂಬತ್ತು ನಾಲ್ಕು ಲಕ್ಷ ರೂಪಾಯಿಗಳು ಮಾತ್ರ)

28/9/2022

(ಮುಕ್ತಾರ್ ಪಾಷ ಹೆಚ್.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಅಲ್ಪಸಂಖ್ಯಾತರ ಕಲ್ಯಾಣ, ಹಜ್
ಮತ್ತು ವಕ್ಫ್ ಇಲಾಖೆ